# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ತತ್ವಶಃ ಅನುಮತಿ ನೀಡಿರುವ 20.40 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 100 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಪತ್ರ ಸಂಖ್ಯೆ : ಇಎನ್ 77 ಎನ್‌ಸಿಇ 2012 ದಿನಾಂಕ : 24.9.2012.
2) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್‌ಇಡಿ/08/GWTPL-20.40 to 100 MW/ Belgaum/2013/1950 ದಿನಾಂಕ: 23.8.2013.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರದಲ್ಲಿ ಮೆ:: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಸಡಲಗಿ, ಮಲ್ಲಿಕವಾಡಿ, ಬೈನಕವಾಡಿ, ವಡಗೋಲ್ ಮತ್ತು ನೇಜ್ ಗ್ರಾಮಗಳಲ್ಲಿ 10.20 ಮೆ.ವ್ಯಾ ಸಾಮರ್ಥ್ಯದ ಮತ್ತು ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಸಟ್ಟಿಗೇರಿ, ಕೋರಕೊಪ್ಪ, ಗುಡಮಡಕೆರೆ, ಹಿರೇಕೋಪ್ ಮತ್ತು ಚಿಕೋಪ್ ಗ್ರಾಮಗಳಲ್ಲಿ 20.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳ ಒಟ್ಟು 30.60 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಘಟಕ ಸ್ಥಾಪಿಸುವ ಬಗ್ಗೆ ವಿವರವಾದ ಯೋಜನಾ ವರದಿಯನ್ನು ಒಂದು ವರ್ಷದೊಳಗೆ ತಯಾರಿಸಿ ಸಲ್ಲಿಸುವ ಷರತ್ತಿಗೊಳಪಟ್ಟು ದಿನಾಂಕ 05.05.2012ರ ಹಂಚಿಕೆ ಸಮಿತಿ ಸಭೆಯಲ್ಲಿ ನಿರ್ಣಯಿಸಿ ತತ್ವಶಃ ಅನುಮತಿಯನ್ನು ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ : ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಸಡಲಗಿ, ಮಲ್ಲಿಕವಾಡಿ, ಬೈನಕವಾಡಿ, ವಡಗೋಲ್ ಮತ್ತು ನೇಜ್ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 10.20 ಮೆ.ವ್ಯಾ. ಸಾಮರ್ಥ್ಯವು ಅನುಷ್ಠಾನಕ್ಕೆ ಯೋಗ್ಯವಲ್ಲವೆಂದು ಅಭಿವೃದ್ಧಿದಾರರು ತಿಳಿಸಿರುವುದಾಗಿ, ಈ ಸಾಮರ್ಥ್ಯವನ್ನು ಹೊರತು ಪಡಿಸಿ, ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಸಟ್ಟಿಗೇರಿ, ಕೋರಕೊಪ್ಪ, ಗುಡಮಡಕೆರೆ, ಹಿರೇಕೋಪ್ ಮತ್ತು ಚಿಕೋಪ್ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 20.40 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 100.00 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತಂತೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಿರುವುದಾಗಿ ತಿಳಿಸುತ್ತಾ, ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದ ನಿಗದಿತ ಶುಲ್ಕ ಪಾವತಿಸಿಕೊಂಡಿರುವುದಾಗಿ, ಸದರಿ ಯೋಜನೆಗೆ ಅವಶ್ಯಕವಾದ ಭೂಮಿಯು ಖಾಸಗಿ ಜಮೀನಾಗಿರುವುದಾಗಿ, ಈ ಯೋಜನೆಯಿಂದ ಉತ್ಪಾದನೆ ಆಗುವ ವಿದ್ಯುತ್ತನ್ನು ಸಂಬಂಧಿಸಿದ ಎಸ್ಕಾಂಗಳೊಂದಿಗೆ ವಿದ್ಯುತ್ ಖರೀದಿ ಒಪ್ಪಂದ ಮಾಡಿಕೊಳ್ಳುವ ಹಾಗೂ ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡುವ ಮತ್ತು ಯೋಜನೆಯನ್ನು 2017–18ರ ಅವಧಿಯಲ್ಲಿ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ಸಾಮರ್ಥ್ಯವನ್ನು ಹೆಚ್ಚಿಸಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 226 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 09.10.2013.**

ಸರ್ಕಾರದ ಪತ್ರ ಸಂಖ್ಯೆ : ಇಎನ್ 77 ಎನ್‌ಸಿಇ 2012 ದಿನಾಂಕ : 24.9.2012ರಲ್ಲಿ ಮೆ:: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ತತ್ವಶಃ ಅನುಮೋದನೆ ನೀಡಿರುವ ಒಟ್ಟು 30.60 ಮೆ.ವ್ಯಾ. ಸಾಮರ್ಥ್ಯದಲ್ಲಿ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಸಡಲಗಿ, ಮಲ್ಲಿಕವಾಡಿ, ಬೈನಕವಾಡಿ, ವಡಗೋಲ್ ಮತ್ತು ನೇಜ್ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 10.20 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ರದ್ದುಪಡಿಸಲಾಗಿದೆ. ಉಳಿದಂತೆ, ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಸಟ್ಟಿಗೇರಿ, ಕೋರಕೊಪ್ಪ, ಗುಡಮಡಕೆರೆ, ಹಿರೇಕೋಪ್ ಮತ್ತು ಚಿಕೋಪ್ ಗ್ರಾಮಗಳಲ್ಲಿ ತತ್ವಶಃ ಅನುಮೋದನೆ ನೀಡಿರುವ 20.40 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು **100.00 ಮೆ.ವ್ಯಾ.** ಸಾಮರ್ಥ್ಯಕ್ಕೆ ಈ ಕೆಳಗಿನ ಷರತ್ತುಗಳಲ್ಲಿ ವಿಧಿಸಿರುವಂತೆ ಹಾಗೂ ಕೆಳಕಂಡ ಷರತ್ತುಗಳನ್ವಯ ಹೆಚ್ಚಿಸಿ ಆದೇಶಿಸಲಾಗಿದೆ :-

........2)

ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ಪಿಪಿಎ / 3ನೇ ವ್ಯಕ್ತಿಯೊಂದಿಗೆ ವಿದ್ಯುತ್ ಮಾರಾಟ ಮಾಡುವ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

9. ಅಭಿವೃದ್ಧಿದಾರರು ಪ್ರತಿ 6 ತಿಂಗಳಿಗೊಮ್ಮೆ ಯೋಜನೆಯ ಪ್ರಗತಿಯ ಕುರಿತು ಕೆಆರ್‌ಇಡಿಎಲ್‌ಗೆ ವರದಿ ಸಲ್ಲಿಸತಕ್ಕದ್ದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
8. ಉಪ ಅರಣ್ಯ ಸಂರಕ್ಷಣಾಧಿಕಾರಿ ಬೆಳಗಾವಿ ಜಿಲ್ಲೆ, ಬೆಳಗಾವಿ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11. ಮೆ : ಗಮೇಸ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್, ಯೂನಿಟ್ 1/7, ಬಿ ಬ್ಲಾಕ್, ನಂ.1 (ಹಳೆ ನಂ.82), [illegible] ರೋಡ್, ಬೆಂಗಳೂರು-01.
12. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.